ವಿಷಯ:- ಪರಿಸರ ಕಾಪಾಡಲು ಕೈಗೊಂಡಿರುವ ಕ್ರಮಗಳು.

22(138)

ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ):- ಮಾನ್ಯ ಪರಿಸರ ಮತ್ತು ಜೀವಿಶಾಸ್ತ್ರ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಅಸಂಪ್ರದಾಯಕ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಪರಿಸರ ಕಾಪಾಡಲು ಪರಿಸರ ಇಲಾಖೆ ಕೈಗೊಂಡಿರುವ ಕ್ರಮಗಳೇನು;

ಆ) ನದಿಗಳ ಹತ್ತಿರ ಇರುವ ಕೈಗಾರಿಕೆಗಳಲ್ಲಿ ಕಲುಷಿತ ನೀರನ್ನು ನದಿಗೆ ಬಿಡುತ್ತಿರುವುದನ್ನು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಬಸವರಾಜ, ನೀ. ಶಿವಣ್ಣನವರ್ (ಪರಿಸರ ಮತ್ತು ಜೀವಿಶಾಸ್ತ್ರ ಮತ್ತು ವಿಜ್ಞಾನ ತಂತ್ರಜ್ಞಾನ ಮತ್ತು ಅಸಂಪ್ರದಾಯಕ ಇಂಧನ ರಾಜ್ಯ ಸಚಿವರು):-

ಅ) ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಡಿ ಬರುವ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಜಲ ಮಾಲಿನ್ಯ (ನಿವಾರಣೆ ಮತ್ತು ನಿಯಂತ್ರಣ) ಅಧಿನಿಯಮ 1974, ಜಲ ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ ಉಪಕಾರ ಅಧಿನಿಯಮ 1977, ವಾಯ (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಅಧಿನಿಯಮ 1981 ಮತ್ತು ಪರಿಸರ (ಸಂರಕ್ಷಣೆ) ಅಧಿನಿಯಮ, 1986ರ ಕೆಲವು ನಿಯಮಗಳನ್ನು ಅಂದರೆ ಅಪಾಯಕರ ನಿರುಪಯುಕ್ತ ವಸ್ತುಗಳ ನಿರ್ವಹಣಾ ಮತ್ತು ನಿರ್ವಹಣಾ ನಿಯಮಗಳು, 1989 ಮತ್ತು ಅಪಾಯಕರ ರಾಸಾಯನಿಕ ತಯಾರಿಕೆ, ದಾಸ್ತಾನು ಮತ್ತು ಆಮದು ನಿಯಮಗಳು, 1989 ಇವುಗಳನ್ನು ಜಾರಿಗೊಳಿಸಲಾಗುತ್ತಿದೆ.

ಆ) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ನಿಗದಿಪಡಿಸಿರುವ ಮಾನಕಗಳಿಗೆ ಶುದ್ಧೀಕರಣ ನೀರನ್ನು ನದಿಗೆ ಬಿಡಲು ಅನುಮತಿ ಕೊಡಲಾಗಿದೆ.

ಇ) 1974ನೇ ಜಲ ಮಾಲಿನ್ಯ (ನಿವಾರಣೆ ಮತ್ತು ನಿಯಂತ್ರಣ) ಅಧಿನಿಯಮ 1977 ಕಾಯ್ದೆಯಡಿಯಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಕೈಗಾರಿಕೆಗಳು ತಮ್ಮ ಕಲುಷಿತ ನೀರನ್ನು ನದಿಗೆ ಬಿಡುವ ಮುನ್ನ ಮಂಡಲಿ ನಿಗಧಿಪಡಿಸಿದ ಮಾಪನಗಳಿಗೆ ಸರಿಹೊಂದುವಂತೆ ಸಂಸ್ಕರಣ ಘಟಕಗಳನ್ನು ಸ್ಥಾಪಿಸಿ ಮಾಪನಗಳಿಗೆ ಸರಿಹೊಂದುವಂತೆ ಶುದ್ಧೀಕರಿಸಿದ ನೀರನ್ನು ಬಿಡಲು ಕ್ರಮಕೈಗೊಳ್ಳಲಾಗುತ್ತಿದೆ. ಮತ್ತು ಇಂತಹ ಕೈಗಾರಿಕೆಗಳ ಮೇಲೆ ಸೂಕ್ತ ನಿಗಾ ಇಡಲಾಗುತ್ತಿದೆ. ನದಿ ದಂಡೆಯಿಂದ 1.5 ಕಿಲೋ ಮೀಟರ್ ಒಳಗೆ ಹೊಸ ಕಾರ್ಖಾನೆಗಳನ್ನು ಸ್ಥಾಪನೆಗೆ ಮಂಡಳಿ ಅನುಮೋದನೆಯನ್ನು ನೀಡುತ್ತಿಲ್ಲ.